# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಚೌಡೇಶ್ವರಿ ವಾರ್ಡ್ ನಂ-02ರಲ್ಲಿ

## ದಿನಾಂಕ: 05-03-2022 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ಕೆ.ಎ.ಶಾಂತರಾಜ್ ನೋಡಲ್ ಅಧಿಕಾರಿಗಳು.
2. ಶ್ರೀ.ಚಂದ್ರಕಾಂತ್‌ರಾಜ್ ಪಿ.ಎ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ.ಬಾಬು ರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್.
5. ಶ್ರೀ.ಮಹಾಂತೇಶ್ ಉಜ್ಜನಿಕೊಪ್ಪ ಹಿರಿಯ ಆರೋಗ್ಯ ಪರಿವೀಕ್ಷಕರು.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1. ವಾರ್ಡ್ ನಂ-02ರ ಕೆಂಚೇನಹಳ್ಳಿ ನಾಗೇನಹಳ್ಳಿ ಮತ್ತು ಹಾರೋಹಳ್ಳಿ ಗ್ರಾಮಗಳಲ್ಲಿ ಕುಡಿಯುವ ನೀರಿನ ಸರಬರಾಜುಅನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸಭೆಯಲ್ಲಿ ಸಂಬಂದಿಸಿದ ಬಿ.ಬಿ.ಎಂ.ಪಿ ವಾಟರ್‌ಮೆನ್‌ಗಳಿಗೆ ಸೂಚಿಸಲಾಯಿತು.

2. ಚೌಡೇಶ್ವರಿ ವಾರ್ಡ್ ನಂ-02ರ ಕೋಟೆ ಬೀದಿಯಲ್ಲಿರುವ ಆರ್.ಓ. ಪ್ಲಾಂಟ್‌ಅನ್ನು ಕೆಂಪೇಗೌಡ ಸಮುದಾಯ ಭವನದ ಹತ್ತಿರ ಸ್ಥಳಾಂತರಿಸಲು ಸಾರ್ವಜನಿಕರು ಕೋರಿದರು.

3. ಕೊಂಡಪ್ಪ ಬಡಾವಣೆಯಲ್ಲಿ ಹಂದಿಗಳ ಕಾಟ ಹೆಚ್ಚಾಗಿದ್ದು, ಹಂದಿಗಳನ್ನು ನಿಯಂತ್ರಣಗೊಳಿಸುವಂತೆ ಸಭೆಯಲ್ಲಿ ಕೋರಿರುತ್ತಾರೆ.

4. ಚೌಡೇಶ್ವರಿ ವಾರ್ಡ್ ನಂ -02ರ ವ್ಯಾಪ್ತಿಯಲ್ಲಿರುವ ಯಲಹಂಕ ಉಪನಗರ 5ನೇ ಹಂತದಲ್ಲಿ ಸ್ಟ್ರೀಟ್ ಲೈಟ್ ಕಂಪ್ಲೇಂಟ್ ಇದ್ದು, ಎ.ಬಿ.ಸಿ. ಕೇಬಲ್ ಬದಲಾವಣೆ ಮಾಡಿಕೊಡುವಂತೆ ಯಲಹಂಕ 5ನೇ ಹಂತದ ನಿವಾಸಿಗಳು ಸಭೆಯಲ್ಲಿ ಸಭೆಯಲ್ಲಿ ಕೋರಿದರು.

5. ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಾಗೂ ಸಮುದಾಯ ಭವನ ಕಟ್ಟಡದ ಆವರಣದಲ್ಲಿ ಕೊವಿಡ್-19 ರ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲು ಹಾಗೂ ವ್ಯಾಕ್ಸಿನ್ ಹಾಕಿಸಿಕೊಳ್ಳುವುದರ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

6. ಕೆರೆ ಪಕ್ಕದಲ್ಲಿರುವ ರಾಜಕಾಲುವೆಯಲ್ಲಿ ಹೂಳು ತುಂಬಿದ್ದು, ಹೂಳನ್ನು ತೆಗೆಯುವಂತೆ ಸಭೆಯಲ್ಲಿ ಸಾರ್ವಜನಿಕರು ಕೋರಿದರು .

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

7/03/2022

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

7/3/2022

ವಾರ್ಡ್‌ನ ನೋಡಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

**ಪ್ರತಿಯನ್ನು:**

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.